# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28 ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 16-01-2021 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಜೋಸ್ಪ್, ಕರ ವಸೂಲಿಗಾರರು,
6. ಶ್ರೀಮತಿ ಜೆ.ಸಿ ಗೀತಾ, ಕಿರಿಯ ಅಭಿಯಂತರರು, ಬೆಸ್ಕಾಂ ಇಲಾಖೆ
7. ಶ್ರೀ ಮುರಳೀಧರ, ಸ್ಥಳೀಯರು,
8. ಶ್ರೀ ರವಿಚಂದ್ರನ್, ಸ್ಥಳೀಯರು,
9. ಶ್ರೀ ಅರುಣಾಚಲಂ, ಸ್ಥಳೀಯರು,
10. ಶ್ರೀ ಮುರುಗದಾಸ್, ಸ್ಥಳೀಯರು,
11. ಶ್ರೀ ಕುಮಾರ್, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಮುರಳೀಧರ್, ಸ್ಥಳೀಯರು ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯ ಕಮ್ಮನಹಳ್ಳಿ ಮುಖ್ಯರಸ್ತೆಯ ಪಾದಾಚಾರಿ ಮಾರ್ಗವನ್ನು ಅಭಿವೃದ್ಧಿ ಪಡಿಸಬೇಕು, ಕಮ್ಮನಹಳ್ಳಿ ರಸ್ತೆಯಲ್ಲಿ ಬೀದಿ ಬದಿ ವ್ಯಾಪಾರಿಗಳನ್ನು ತೆರವುಗೊಳಿಸಬೇಕು, ಹಾಗೂ ಭಾನುವಾರ ದಿನದಂದು ಮೀನು ಮಾರಾಟಗಾರರು ರಸ್ತೆಯಲ್ಲಿಯೇ ಮಾರಾಟ ಮಾಡುತ್ತಿದ್ದು, ಅದಕ್ಕೆ ಅವಕಾಶ ನೀಡಬಾರದೆಂದು ಸಭೆಯಲ್ಲಿ ಪ್ರಸ್ತಾಪಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸರಬರಾಜನ್ನು ರಾತ್ರಿ ಸಮಯದಲ್ಲಿ ನೀರನ್ನು ಬಿಡುತ್ತಿರುವುದರಿಂದ ಸಾರ್ವಜನಕರಿಗೆ ತೊಂದರೆಯಾಗುತ್ತಿದ್ದು, ಹಗಲು ಸಮಯದಲ್ಲಿ ವಾರಕ್ಕೆ ಮೂರು ಬಾರಿ ನೀರು ಸರಬರಾಜು ಮಾಡಲು ಸಭೆಗೆ ತಿಳಿಸಿದರು.

**2) ಶ್ರೀ ರವಿಚಂದ್ರನ್, ಸ್ಥಳೀಯರು ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ರಸ್ತೆಗಳಲ್ಲಿ ಬಿದ್ದಿದ್ದ ರಸ್ತೆ ಗುಂಡಿಗಳನ್ನು ಮುಚ್ಚಿ ಸಾರ್ವಜನಿಕ ಓಡಾಟಕ್ಕೆ ಅನುಕೂಲ ಕಲ್ಪಸಿದ್ದಕ್ಕಾಗಿ ಧನ್ಯವಾದ ತಿಳಿಸಿದರು. ಹಾಗೂ ಹೊಸದಾಗಿ ಕೊಳವೆ ಬಾವಿಗಳನ್ನು ಕೊರೆಯಲು

ಕೋರಿದರು. ಕೆ.ಹೆಚ್.ಬಿ ಕಾಲೋನಿಯ ಸುತ್ತಮುತ್ತಲಿನ ಪ್ರದೇಶದಲ್ಲಿ ಬಿದ್ದಿರುವ ಕಸವನ್ನು ಆಗಿಂದ್ದಾಗ್ಗೆ ತೆರವುಗೊಳಿಸಲು ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಸಾರ್ವಜನಿಕರಿಂದ ಅನೇಕ ಗುರುತಿನ ಚೀಟಿಗಳನ್ನು ಮಾಡಿಕೊಡಲು ಮನವಿ ಪತ್ರ ಸಲ್ಲಿಸಿದ್ದು, ಇದುವರೆವಿಗೂ ಯಾವುದೇ ಗುರುತಿನ ಚೀಟಿಗಳನ್ನು ಮಾಡಿರುವುದಿಲ್ಲ. ಆದುದರಿಂದ ಕೂಡಲೇ ಪಡಿತರ ಚೀಟಿಗಳನ್ನು ಮಾಡಿಕೊಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

**3) ಶ್ರೀ ಅರುಣಾಚಲಂ, ಸ್ಥಳೀಯರು ಮಾತನಾಡುತ್ತಾ,**

- ಕಾವೇರಿ ಅಸೋಸಿಯೇಷನ್ ರಸ್ತೆಗೆ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲು ಹಾಗೂ ರಾಜಕಾಲುವೆಗೆ ಹೊಂದಿಕೊಂಡಿರುವ ಚರಂಡಿಯನ್ನು ಸೇರಿಸಬೇಕೆಂದು ಸಭೆಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡಲು ಸಭೆಗೆ ತಿಳಿಸಿದರು.

**4) ಶ್ರೀ ಕುಮಾರ್, ಸ್ಥಳೀಯರು ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯಲ್ಲಿ ಕೋಳಿ ಅಂಗಡಿಯವರು ತ್ಯಾಜ್ಯ ನೀರನ್ನು ಚರಂಡಿಗೆ ಬಿಡುತ್ತಿದ್ದು, ಇದರಿಂದ ದುರ್ವಾಸನೆ ಬರುತ್ತಿದ್ದು, ಇದನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಇದನ್ನು ತಡೆಗಟ್ಟಲು ಸಭೆಯಲ್ಲಿ ಪ್ರಸ್ತಾಪಿಸಿದರು.

**5) ಶ್ರೀ ಮುರುಗದಾಸ್, ಸ್ಥಳೀಯರು ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯ ಮುನಿಸ್ವಾಮಪ್ಪ ರಸ್ತೆಗೆ ಹೊಸದಾಗಿ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಸಬೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು. ಹಾಗೂ ಪ್ರತಿ ಶುಕ್ರವಾರ ಕಮ್ಮನಹಳ್ಳಿ ಮುಖ್ಯರಸ್ತೆಯ ಪಾದಾಚಾರಿ ಮಾರ್ಗದಲ್ಲಿ ಇಟ್ಟಿರುವ ತಳ್ಳುವ ಗಾಡಿಗಳ ಮಾಲೀಕರಿಗೆ ತಾವುಗಳು ಮುಖ್ಯರಸ್ತೆಯಲ್ಲಿ ವ್ಯಾಪಾರ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ರಸ್ತೆಯಲ್ಲಿ ಒಂದೆ ಕಡೆ ವ್ಯಾಪಾರ ಮಾಡದೇ ತಳ್ಳುವ ಗಾಡಿಗಳನ್ನು ತೆಗೆದುಕೊಂಡು ವ್ಯಾಪಾರ ಮಾಡಲು ಸೂಚಿಸಲು ಆರೋಗ್ಯ ನಿರೀಕ್ಷಕರಿಗೆ ತಿಳಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

16/01/21
**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

**ಪ್ರತಿಯನ್ನು**

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ

6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಕಾಂಟಾಕ್ಟ್ ಟ್ರೇಸಿಂಗ್ ನೋಡಲ್ ಅಧಿಕಾರಿ, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
11) ಹೋಮ್ ಕ್ವಾರೆಂಟೈನ್ ಸ್ಕ್ವಾಡ್ ನೋಡಲ್ ಅಧಿಕಾರಿ, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
12) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
13) ಸಹಾಕಯ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
14) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
15) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
16) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
17) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
18) ಕಛೇರಿ ಪ್ರತಿ.